ಬೆಂ.ಗ್ರಾಮಾಂತರ

## ಅರ್ಜಿ ಆಹ್ವಾನ

ದಾಬಸ್‌ಪೇಟೆ : ಕರ್ನಾಟಕ ಲೋಕಸೇವಾ ಆಯೋಗ ದ್ವಿತೀಯ ದರ್ಜೆ ಸಹಾಯಕರು ಹಾಗೂ ಪ್ರಥಮ ದರ್ಜೆ ಸಹಾಯಕ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿದ್ದು, ಪಿಯುಸಿ ಹಾಗೂ ಪದವಿ ಶಿಕ್ಷಣ ಮುಗಿಸಿದ ಅರ್ಹ ಅಭ್ಯರ್ಥಿಗಳು ತ್ಯಾಮಗೊಂಡ್ಲು ಪ್ರಥಮ ದರ್ಜೆ ಕಾಲೇಜಿನ ಪ್ಲೇಸ್‌ಮೆಂಟ್ ಸೆಲ್‌ನಿಂದ ಉಚಿತ ತರಬೇತಿಯನ್ನು ಆಯೋಜಿಸಲಾಗಿದೆ. ಗ್ರಾಮೀಣ ವಿದ್ಯಾರ್ಥಿಗಳು ಈ ತರಬೇತಿಯ ಸೌಲಭ್ಯ ಪಡೆದುಕೊಳ್ಳಬಹುದು ಎಂದು ತ್ಯಾಮಗೊಂಡ್ಲು ಪ್ರಥಮ ದರ್ಜೆ ಕಾಲೇಜಿನ ಪ್ರಭಾರ ಪ್ರಾಂಶುಪಾಲ ಕೆ.ಸಿ. ಬಸವರಾಜು ತಿಳಿಸಿದರು.



ಪುರಸಭೆ ಸಾಮಾನ್ಯ ಸಭೆಯಲ್ಲಿ ಅಧಿಕಾರಿಗಳಿಗೆ ಶಾಸಕ ಎಚ್.ಸಿ. ಬಾಲಕೃಷ್ಣ ಖಡಕ್ ಸೂಚನೆ

# ಅನಧಿಕೃತ ಫ್ಲೆಕ್ಸ್ ತೆರವುಗೊಳಿಸಿ: ಬಾಲಕೃಷ್ಣ

**ವಿಶ್ವವಾಣಿ ಸುದ್ದಿಮನೆ** ರಾಮನಗರ

ಬಿಡದಿ ಪುರಸಭೆ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಫ್ಲೆಕ್ಸ್‌ಗಳನ್ನು ಕೂಡಲೇ ತೆರವುಗೊಳಿಸಿ, ಶುಲ್ಕ ಪಾವತಿಸಿ ಅನುಮತಿ ಪಡೆದವರಿಗಷ್ಟೇ ಫ್ಲೆಕ್ಸ್ ಅಳವಸಿಕೆಗೆ ಅವಕಾಶ ನೀಡುವಂತೆ ಪುರಸಭೆ ಅಧಿಕಾರಿಗಳಿಗೆ ಶಾಸಕ ಎಚ್.ಸಿ.ಬಾಲಕೃಷ್ಣ ಸೂಚನೆ ನೀಡಿದರು.

ಬಿಡದಿಯ ಪುರಸಭೆ ಕಚೇರಿ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಪಟ್ಟಣದಾದ್ಯಂತ ಎಲ್ಲೆಂದರಲ್ಲಿ ಫ್ಲೆಕ್ಸ್ ಅಳವಡಿಸಿರುವುದರಿಂದ ಪಟ್ಟಣದ ಸೌಂದರ್ಯಕ್ಕೆ ಧಕ್ಕೆಯಾಗುವ ಜತೆಗೆ ಸಾರ್ವಜನಿಕರಿಗೂ ಕಿರಿಕಿರಿಯಾಗುತ್ತಿದೆ. ಶುಲ್ಕ ವಿಧಿಸಿದಲ್ಲಿ ಅನಧಿಕೃತ ಫ್ಲೆಕ್ಸ್ ಅಳವಡಿಕೆಗೆ ಕಡಿವಾಣ ಬೀಳುವ ಜತೆಗೆ ಪುರಸಭೆಗೂ ಆದಾಯ ಬರಲಿದೆ ಎಂದರು.

ಬೆಂಗಳೂರು-ಮೈಸೂರು ಹೆದ್ದಾರಿ ಅಕ್ಕಪಕ್ಕದಲ್ಲಿ ದೊಡ್ಡ ದೊಡ್ಡ ಕಮಾನುಗಳನ್ನು ನಿರ್ಮಿಸಿ ಫ್ಲೆಕ್ಸ್‌ಗಳನ್ನು ಅಳವಡಿಸಲು ಸಾವಿರಾರು ರುಪಾಯಿಗೆ ಬಾಡಿಗೆಗೆ ನೀಡಿರುವ ಬಗ್ಗೆ ಮಾಹಿತಿ ಇದೆ. ಇವುಗಳೂ ಸೇರಿದಂತೆ ಅಳವಡಿಕೆಯಾಗಿರುವ ಎಲ್ಲ ಫ್ಲೆಕ್ಸ್‌ಗಳನ್ನು ತೆರವುಗೊಳಿಸಬೇಕು. ಹಣ ಪಾವತಿಸಿದ ನಂತರವೇ ಅನುಮತಿ ನೀಡಬೇಕು. ಈ ಕಾರ್ಯದಲ್ಲಿ ಯಾರ ಮರ್ಜಿಗೂ ಒಳಗಾಗಬಾರದು ಎಂದು ಎಚ್ಚರಿಕೆ ನೀಡಿದರು.

**ಸದಸ್ಯರ ಮನವಿ:** ಕುಡಿಯುವ ನೀರು, ಸ್ವಚ್ಛತೆ, ಬೀದಿ ದೀಪ ಸೇರಿದಂತೆ ಇನ್ನಿತರೆ ಸಮಸ್ಯೆಗಳನ್ನು ಪರಿಹರಿಸುವಂತೆ ಸ್ವತಃ ಪುರಸಭೆ ಸದಸ್ಯರೇ ಮನವಿ ಮಾಡಿದರೂ ಅಧಿಕಾರಿಗಳು ಮತ್ತು ಸಿಬ್ಬಂದಿ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಇದರಿಂದ ನಾವು ವಾರ್ಡ್‌ಗಳ ಕಡೆ ತಲೆ ಹಾಕದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.

**ಗೊಂದಲದ ಗೂಡು:** ಸಮಸ್ಯೆಗಳಿಗೆ ಏಕೆ ಸ್ಪಂದಿಸುತ್ತಿಲ್ಲ ಎಂದು ಶಾಸಕ ಎಚ್.ಸಿ.ಬಾಲಕೃಷ್ಣ ಪುರಸಭೆ ಸಿಬ್ಬಂದಿಯನ್ನು ಪ್ರಶ್ನಿಸಿದಾಗ ಸಮಸ್ಯೆ ಬಗ್ಗೆ ನಮ್ಮ ಗಮನಕ್ಕೆ ತಂದಿಲ್ಲ ಎಂದು ಉತ್ತರಿಸಿದರು. ಸಿಬ್ಬಂದಿಯ ಉತ್ತರಕ್ಕೆ ಕೆಂಡಾಮಂಡಲರಾದ ಸದಸ್ಯರು ಸಿಬ್ಬಂದಿ ಸುಳ್ಳು ಹೇಳುತ್ತಿದ್ದಾರೆ ಎಂದು ಏರು ಧ್ವನಿಯಲ್ಲಿ ಕೂಗಾಡತೊಡಗಿದಾಗ ಸಭೆ ಗೊಂದಲದ ಗೂಡಾಗಿ ಪರಿಣಮಿಸಿತು.



ಬಿಡದಿ ಪುರಸಭೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಶಾಸಕ ಎಚ್.ಸಿ.ಬಾಲಕೃಷ್ಣ ಮಾತನಾಡಿದರು.

ಈ ವೇಳೆ ಶಾಸಕ ಬಾಲಕೃಷ್ಣ ಮಾತನಾಡಿ, ಸದಸ್ಯರಾಗಲೀ, ಸಾರ್ವಜನಿಕರಾಗಲೀ ಸಮಸ್ಯೆಗಳನ್ನು ಪುರಸಭೆಯಲ್ಲಿರುವ ದೂರು ಪುಸ್ತಕದಲ್ಲಿ ದಾಖಲಿಸಬೇಕು. ಒಂದು ವೇಳೆ ಸಿಬ್ಬಂದಿ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಪ್ರಶ್ನಿಸಲು ದಾಖಲೆ ಇರುತ್ತದೆ. ದೂರು ಬಂದ ಕೂಡಲೇ ಸಿಬ್ಬಂದಿಗಳು ಸ್ಪಂದಿಸಬೇಕು ನಿರ್ಲಕ್ಷ್ಯ ವಹಿಸುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಬಾಲಕೃಷ್ಣ ಎಚ್ಚರಿಕೆ ನೀಡಿದರು.

**ಯಥಾಸ್ಥಿತಿ ಕಾಯ್ದುಕೊಳ್ಳಿ:** ಪಟ್ಟಣದ ಬಿಜಿಎಸ್ ವೃತ್ತದಿಂದ ಪುರಸಭೆ ಕಚೇರಿವರೆಗಿನ ಮುಖ್ಯರಸ್ತೆಯ ಎರಡೂ ಬದಿ ಹಾಗೂ ಬಸ್ ನಿಲ್ದಾಣದ ಅಕ್ಕಪಕ್ಕದಲ್ಲಿ ಅಕ್ರಮವಾಗಿ ನಿರ್ಮಾಣವಾಗಿರುವ ಅಂಗಡಿ ಮಳಿಗೆಗಳನ್ನು ತೆರವುಗೊಳಿಸದೆ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಶಾಸಕ ಬಾಲಕೃಷ್ಣ ಸಲಹೆ ನೀಡಿದರು.

ರಸ್ತೆಯ ಎರಡೂ ಬದಿಯ ಪುರಸಭೆ ಜಾಗದಲ್ಲಿ ಸುಮಾರು 84 ಅಂಗಡಿ ಮಳಿಗೆಗಳಿವೆ. ಕೆಲ ಪ್ರಭಾವಿಗಳು ಪುರಸಭೆ ಜಾಗದಲ್ಲಿಯೇ ಎಸಿ ಶೀಟ್‌ನಿಂದ ಮಳಿಗೆ ನಿರ್ಮಿಸಿ ಪ್ರತಿ ತಿಂಗಳು 15 ಸಾವಿರದವರೆಗೆ ಒಟ್ಟು ಮೂರ್‍ನಾಲ್ಕು ಲಕ್ಷ ಬಾಡಿಗೆ ವಸೂಲಿ ಮಾಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಎಲ್ಲ ಅಂಗಡಿಗಳನ್ನು ತೆರವುಗೊಳಿಸಬೇಕು ಎಂದು ಕೆಲ ಸದಸ್ಯರು ಆಗ್ರಹಿಸಿದರು.

25-30 ವರ್ಷದಿಂದ ಗೂಡಂಗಡಿಗಳನ್ನು ನಿರ್ಮಿಸಿಕೊಂಡು ಹೊಟ್ಟೆಪಾಡಿಗಾಗಿ ವ್ಯಾಪಾರ ನಡೆಸುತ್ತಿದ್ದಾರೆ. ಇದೀಗ ಅಂಗಡಿಗಳನ್ನು ತೆರವುಗೊಳಿಸಿದರೆ ಅವರ ಹೊಟ್ಟೆ ಮೇಲೆ ಹೊಡೆದಂತಾಗುತ್ತದೆ. ಆದ್ದರಿಂದ ವ್ಯಾಪಾರಸ್ಥರನ್ನು ಯಾವುದೇ ಕಾರಣಕ್ಕೂ ತೆರವುಗೊಳಿಸಬಾರದು ಎಂದು ಕೆಲವು ಸದಸ್ಯರು ವಾದಿಸಿದರು.

**ಸ್ಥಳಾಂತರಿಸಿ:** ಈ ವೇಳೆ ಮಧ್ಯ ಪ್ರವೇಶಿಸಿದ ಶಾಸಕ ಎಚ್.ಸಿ.ಬಾಲಕೃಷ್ಣ, ಸದ್ಯಕ್ಕೆ ಟೆಂಡರ್ ಕರೆದು ಖಾಸಗಿ ವ್ಯಕ್ತಿಗಳ ಪಾಲಾಗುತ್ತಿರುವ ಬಾಡಿಗೆಯನ್ನು ಪುರಸಭೆಗೆ ಸಂದಾಯವಾಗುವಂತೆ ಮಾಡಿ. ನಂತರ ಸೂಕ್ತ ಸ್ಥಳ ಗುರುತಿಸಿ, ಅಲ್ಲಿ ಎಲ್ಲ ಸೌಲಭ್ಯಗಳನ್ನೂ ನೀಡಿ ನಂತರ ಎಲ್ಲ ವ್ಯಾಪಾರಿಗಳನ್ನು ಅಲ್ಲಿಗೆ ಸ್ಥಳಾಂತರಿಸಿ ಎಂದು ಸಲಹೆ ನೀಡಿದರು.

ಸಭೆಯಲ್ಲಿ ಅಧ್ಯಕ್ಷೆ ವೆಂಟಕೇಶಮ್ಮ ರಾಮಕೃಷ್ಣಯ್ಯ, ಉಪಾಧ್ಯಕ್ಷೆ ವೈಶಾಲಿ ಚನ್ನಪ್ಪ, ಸ್ಥಾಯಿ ಸಮಿತಿ ಅಧ್ಯಕ್ಷ ಉಮೇಶ್, ಮುಖ್ಯಾಧಿಕಾರಿ ಶಿವನಂಕಾರಿಗೌಡ ಸೇರಿದಂತೆ ಸದಸ್ಯರು ಹಾಗೂ ಸಿಬ್ಬಂದಿ ವರ್ಗ ಹಾಜರಿದ್ದರು.

### ಪಾಪದ ಕೂಸಾದ ಪುರಸಭೆ:

ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ಬಿಡದಿ ಪುರಸಭೆಯು ಪಾಪದ ಕೂಸಾಗಿದೆ. ಗ್ರಾಪಂಗಳಿಂದ ಪುರಸಭೆಗೆ ದಾಖಲಾತಿಗಳನ್ನು ಹಸ್ತಾಂತರಿಸುವ ವೇಳೆ ಹಲವಾರು ಅವ್ಯವಹಾರಗಳು ನಡೆದಿವೆ. ಇನ್ನೂ ಹತ್ತು ವರ್ಷ ಕಳೆದರೂ ಅವುಗಳನ್ನು ಸರಿಪಡಿಸಲು ಸಾಧ್ಯವಿಲ್ಲ ಎಂದು ಸದಸ್ಯ ರಮೇಶ್‌ಕುಮಾರ್ ವಿಷಾದಿಸಿದರು.

ಪಟ್ಟಣದಲ್ಲಿ ಕುಡಿಯುವ ನೀರು, ರಸ್ತೆ, ಒಳಚರಂಡಿ ವ್ಯವಸ್ಥೆಯೇ ಇಲ್ಲದಂತಾಗಿದೆ. ಮೂಲಭೂತ ಸಮಸ್ಯೆ ಬಗೆಹರಿಸಲು ಪುರಸಭೆಯಲ್ಲಿ ಸಾಕಷ್ಟು ಅನುದಾನವಿಲ್ಲದಂತಾಗಿದೆ. ಮತ್ತೊಂದೆಡೆ ಪಂಚಾಯಿತಿಯಲ್ಲಿ ಕೈಗೊಂಡಿರುವ ತಪ್ಪು ನಿರ್ಣಯ ಕೈಗೊಂಡು ಅವುಗಳನ್ನು ಪುರಸಭೆಗೆ ಹಸ್ತಾಂತರಿಸಲಾಗಿದೆ. ಜತೆಗೆ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಅಭಿವೃದ್ಧಿ ಆಮೆಗತಿಯಲ್ಲಿ ಸಾಗಿದೆ. ಹೀಗೇ ಮುಂದುವರಿದರೆ ದಶಕ ಕಳೆದರೂ ಬಿಡದಿ ಪಟ್ಟಣ ಅಭಿವೃದ್ಧಿಯಾಗುವುದಿಲ್ಲ ಎಂದರು.

## ಸಮಾಚಾರ ಸಣ್ಣದಲ್ಲ

### ಭಾರಿ ಮಳೆಯಿಂದ ಗೋಡೆ ಕುಸಿತ

**ಆನೇಕಲ್:** ಸಮಂದೂರು ಗ್ರಾ.ಪಂ ವ್ಯಾಪ್ತಿಯ ಮುತ್ತುಗಟ್ಟಿ ದಿಣ್ಣೆಯಲ್ಲಿ ಸುರಿದ ಮಳೆಗೆ ಮನೆಯೊಂದರ ಗೋಡೆ ಕುಸಿದು ಕುಸಿದು ಬಿದ್ದಿದೆ. ಅದೃಷ್ಟವಶಾತ್ ಯಾರಿಗೂ ಅಪಾಯ ಆಗಿಲ್ಲ. ಸ್ಥಳಕ್ಕೆ ಆಗಮಿಸಿದ ಗ್ರಾಪಂ ಸದಸ್ಯ ದೊಡ್ಡಯ್ಯ ಮನೆ ರಿಪೇರಿಗೆ ಐದು ಸಾವಿರ ರು. ನೀಡಿದ್ದು, ಪಂಚಾಯತಿಯಿಂದ ಮನೆಯನ್ನು ಸರಿಪಡಿಸಲು ಹಣ ನೀಡಲು ಒತ್ತಾಯಿಸಿದ್ದಾರೆ. ಕುಟುಂಬವು ಬಡತನ ದಲ್ಲಿದ್ದು, ಮನೆಯನ್ನು ಸರಿಪಡಿಸಿಕೊಳ್ಳುವ ಸ್ಥಿತಿಯಲ್ಲಿ ಇಲ್ಲದೆ ಗ್ರಾಮ ಪಂಚಾಯತಿಯ ಮೊರೆ ಹೋಗಿದ್ದಾರೆ.

ಮುತ್ತುಗಟ್ಟಿ ದಿಣ್ಣೆ ತಗ್ಗು ಪ್ರದೇಶದಲ್ಲಿದ್ದು ಮಳೆಯಿಂದ ಈ ಭಾಗಗದ ಹಳೆಯ ಮನೆಗಳ ಮಾಲೀಕರು ಭಯದ ವಾತಾವರಣದಲ್ಲಿ ಬದುಕುತ್ತಿದ್ದಾರೆ.



ಸಮಂದೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಮುತ್ತುಗಟ್ಟಿಯಲ್ಲಿ ಮಳೆಗೆ ಮನೆಯ ಗೋಡೆ ಕುಸಿದು ಬಿದ್ದಿದೆ.

### ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನ

**ನೆಲಮಂಗಲ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಭಾರತ ಸರಕಾರದ ರಾಷ್ಟ್ರೀಯ ವಿದ್ಯಾರ್ಥಿ ವೇತನದ ಪೋರ್ಟಲ್‌ನಲ್ಲಿ 2017-18ನೇ ಸಾಲಿನ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ (9 ಮತ್ತು 10) ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 31 ರೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಿದೆ. ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಸಂಪಂಗಿ ರಾಮನಗರ, ಬೆಂಗಳೂರು. ದೂ.: 080-22240483 ಸಂಪರ್ಕಿ ಸಬಹುದಾಗಿದೆ.

### 4 ಲಕ್ಷಕ್ಕೂ ಹೆಚ್ಚು ಮೌಲ್ಯದ ಸಾಮಗ್ರಿ ಕಳವು

**ಚನ್ನಪಟ್ಟಣ:** ತಾಲೂಕಿನ ಚಕ್ಕೆರೆ ಗ್ರಾಮದಲ್ಲಿ ಪಾಲಿ ಹೌಸ್ ನಿರ್ಮಾಣಕ್ಕೆ ತಂದಿದ್ದ ರು. 4 ಲಕ್ಷಕ್ಕೂ ಹೆಚ್ಚು ಮೌಲ್ಯದ ಸಾಮಗ್ರಿಗಳನ್ನು ಕಳವು ಮಾಡಿರುವ ಘಟನೆ ನಡೆದಿದೆ.

ಗ್ರಾಮದ ಪ್ರಸನ್ನಕುಮಾರ್ ಎಂಬುವವರಿಗೆ ಸೇರಿದ ಪಾಲಿಹೌಸ್ ನಲ್ಲಿ ಕಳ್ಳತನವಾಗಿದ್ದು, ಇಲ್ಲಿ ಕೂಲಿಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದ ತಮಿಳುನಾಡು ಮೂಲದ ವ್ಯಕ್ತಿಗಳು ಈ ಕಳ್ಳತನ ಮಾಡಿ ಪರಾರಿಯಾಗಿದ್ದಾರೆ ಎಂದು ಗ್ರಾಮಾಂತರ ಪೊಲೀಸರಿಗೆ ದೂರು ನೀಡಲಾಗಿದೆ. 7 ರೋಲ್ ಪ್ಲಾಸ್ಟಿಕ್ ಪೇಪರ್, ಪೈಪುಗಳು, ವೆಲ್ಡಿಂಗ್ ಮಿಷನ್, ಮೆಷ್, ಕಟಿಂಗ್ ಮಿಷನ್, ಹಳೆಯ ಪ್ಲಾಸ್ಟಿಕ್ ಪೇಪರ್ ಸೇರಿದಂತೆ ರು. 4 ಲಕ್ಷಕ್ಕೂ ಹೆಚ್ಚು ಮೌಲ್ಯದ ವಸ್ತುಗಳನ್ನು ಇವರು ರಾತ್ರೋರಾತ್ರಿ ತುಂಬಿಕೊಂಡು ಪರಾರಿಯಾಗಿದ್ದಾರೆ ಎಂದು ದೂರಲಾಗಿದೆ. ಪ್ರಸನ್ನಕುಮಾರ್ ವಿಮಾಣವನ್ನು ಪಡೆದು ಹೊಸದಾಗಿ ಪಾಲಿಹೌಸ್ ನಿರ್ಮಾಣಕ್ಕೆ ಮುಂದಾಗಿದ್ದರು. ಈ ಕೆಲಸದ ಕಾಮಗಾರಿಯನ್ನು ಪಟ್ಟಣದ ರಾಜೀವ ಎಂಬುವವರಿಗೆ ನೀಡಿದ್ದರು. ರಾಜೀವ ತಮ್ಮ ಬಳಿ ಕಳೆದ ಮೂರ್‍ನಾಲ್ಕು ತಿಂಗಳ ಹಿಂದೆ ಕೆಲಸಕ್ಕೆ ಸೇರಿದ್ದ ತಮಿಳುನಾಡಿನ ಕೃಷ್ಣಗಿರಿ ಬಳಿಯ ತೀರ್ಥಂನ ವಾಸಿಗಳಾದ ಸುಬ್ರಹ್ಮಣಿ, ಶ್ರೀನಿವಾಸ, ಗೋವಿಂದ, ರಾಜ ಹಾಗೂ ಮತ್ತಿಬ್ಬರು ಸ್ನೇಹಿತರಿಗೆ ಕೆಲಸ ಮಾಡಲು ಬಿಟ್ಟಿದ್ದರು. ಒಂದು ತಿಂಗಳಿಂದ ಪಾಲಿಹೌಸ್ ನಿರ್ಮಾಣ ಕಾಮಗಾರಿ ಕೆಲಸ ಮಾಡುತ್ತಿದ್ದ ಇವರೆ ಸಾಮಗ್ರಿಗಳನ್ನು ಕದ್ದು ಪರಾರಿಯಾಗಿದ್ದಾರೆ ಎಂದು ಪ್ರಸನ್ನಕುಮಾರ್ ಆರೋಪಿಸಿದ್ದಾರೆ.

## ಜಯಕರ್ನಾಟಕ ಸಂಘಟನೆಗೆ ಸೇರ್ಪಡೆ



ತಾಲೂಕು ಜಯಕರ್ನಾಟಕ ಸಮಾವೇಶದಲ್ಲಿ ಕಾರ್ಯಕ್ರಮವನ್ನು ಉದ್ಘಾಟಿಸಿದ ರಾಜ್ಯ ಘಟಕದ ಅಧ್ಯಕ್ಷ ದೀಪಕ್ ಹಾಗೂ ಇತರರು.

**ದೇವನಹಳ್ಳಿ:** ಟೌನಿನ ಗುರುಭವನದಲ್ಲಿ ಏರ್ಪಡಿಸಿದ್ದ ತಾಲೂಕು ಜಯಕರ್ನಾಟಕ ಸಮಾವೇಶದಲ್ಲಿ ವಿವಿಧ ಕನ್ನಡಪರ ಸಂಘಟನೆಗಳ ಕಾರ್ಯ ಕರ್ತರು ಜಯಕರ್ನಾಟಕ ಸಂಘಟನೆ ಸೇರಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ರಾಜ್ಯ ಘಟಕದ ಅಧ್ಯಕ್ಷ ದೀಪಕ್, ಬಯಲುಸೀಮೆ ಪ್ರದೇಶಗಳಿಗೆ ನೀರು ಹರಿಸುವ ಎತ್ತಿನಹೊಳೆ ಯೋಜನೆ ನಿಧಾನಗತಿಯಲ್ಲಿ ನಡೆಯುತ್ತಿದೆ. ಕೃಷಿ ಚಟುವಟಿಕೆಗೆ ಸಮಗ್ರ ನೀರಾವರಿ ಶಾಶ್ವತ ಯೋಜನೆಯನ್ನು ಜಾರಿಗೆ ತರಲು ಒತ್ತಾಯಿಸಿ ನಮ್ಮ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷರಾದ ಮುತ್ತಪ್ಪ ರೈ ನೇತೃತ್ವದಲ್ಲಿ ಐದು ಜಿಲ್ಲೆಯ ಪದಾಧಿಕಾರಿಗಳು ದೇವನಹಳ್ಳಿಯಿಂದ ಕೋಲಾರಕ್ಕೆ ಕಾಲ್ನಡಿಗೆ ಜಾಥಾ ನಡೆಸಿ ಅಲ್ಲಿ ಸಮಾವೇಶ ಮಾಡಿ, ಸರಕಾರದ ಮೇಲೆ ಒತ್ತಡ ಹೇರಲಾಗುವುದು ಎಂದರು.

ಜಿಲ್ಲಾ ಘಟಕದ ಅಧ್ಯಕ್ಷ ಜಗದೀಶ್ ಮಾತನಾಡಿ, ಸ್ವಾತಂತ್ರ್ಯ ಬಂದು 70ವರ್ಷಗಳಾದರೂ ಬಯಲು ಸೀಮೆಗೆ ನೀರು ಹರಿಸುವ ಸೌಲಭ್ಯ ಮಾಡದಿರುವುದು ವಿಷಾದನೀಯ. ದೇಶವನ್ನಾಳಿದ ಸರಕಾರಗಳು ಬರಿ ಓಟ್ ಬ್ಯಾಂಕ್ ರಾಜಕಾರಣ ಮಾಡಿ ಬಡ ರೈತರನ್ನು ಬಡವರಾಗಿಯೇ ಉಳಿಸಿದ್ದಾರೆ ಎಂದರು. ನೂತನವಾಗಿ ಆಯ್ಕೆಯಾದ ಸಂಘಟನೆಯ ತಾಲೂಕು ಅಧ್ಯಕ್ಷ ಚೇತನ್ ರೆಡ್ಡಿಹಳ್ಳಿ ಮಾತನಾಡಿ, ತಾಲೂಕಿನಲ್ಲಿರುವ ಕಂದಾಯ ಇಲಾಖೆಗೆ ಸಕಾಲದಲ್ಲಿ ಅರ್ಜಿ ಸಲ್ಲಿಸಿದರೂ ಸರಿಯಾಗಿ ಕಾರ್ಯನಿರ್ವಹಿಸದೇ ರೈತರು ಅಲೆದಾಡುವ ಪರಿಸ್ಥಿತಿ ಉದ್ಭವವಾಗಿದೆ. ಅಧಿಕಾರಿಗಳು ನಿಗದಿತ ವೇಳೆಯಲ್ಲಿ ಸಿಗುವುದೇ ದುರ್ಲಭ ಎಂದರು. ಜಿಲ್ಲಾ ನೂತನ ಉಪಾಧ್ಯಕ್ಷರಾಗಿ ಎಸ್.ವಿಜಯ್‌ಕುಮಾರ್, ರಾಜ್ಯ ಕಾರ್ಯಕಾರಿ ಮಂಡಳಿ ಸದಸ್ಯರನ್ನಾಗಿ ಟಿ. ರವಿ ಅವರನ್ನು ನೇಮಕ ಮಾಡಲಾಯಿತು.

ಈ ಸಮಾವೇಶದಲ್ಲಿ ರಾಜ್ಯ ಉಪಾಧ್ಯಕ್ಷ ರಾಮಚಂದ್ರಪ್ಪ, ಕಾರ್ಯಕಾರಿ ಸಮಿತಿ ಸದಸ್ಯ ಕೆ. ವೆಂಕಟೇಶ್, ಜಿಲ್ಲಾ ಕಾರ್ಯಾಧ್ಯಕ್ಷ ಹೊನ್ನಪ್ಪ, ನಗರ ಘಟಕದ ಅಧ್ಯಕ್ಷ ಕೆ. ಮಂಜುನಾಥ್, ಸಂಘಟನಾ ಕಾರ್ಯದರ್ಶಿ ಪ್ರಸನ್ನ, ಸಂಚಾಲಕ ಆನಂದ್, ರಾಮಚಂದ್ರಪ್ಪ, ಮುನಿರಾಜು ಮತ್ತಿತರರಿದ್ದರು.

## ಗ್ರಾಮೀಣಾಭಿವೃದ್ಧಿಯೇ ಮುಖ್ಯಗುರಿ : ಶಾಸಕ

**ವಿಶ್ವವಾಣಿ ಸುದ್ದಿಮನೆ** ನಂದಗುಡಿ

ಕ್ಷೇತ್ರಕ್ಕೆ ಸೇರಿದ ಎಲ್ಲ ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿಯೇ ನನ್ನ ಗುರಿ. ಮೂಲ ಸೌಕರ್ಯಗಳನ್ನು ಒದಗಿಸಿ ಜನತೆಗೆ ಅನುಕೂಲ ಕಲ್ಪಿಸುವುದೇ ಧ್ಯೇಯವಾಗಿದೆ ಎಂದು ಶಾಸಕ ಎನ್. ನಾಗರಾಜು ಹೇಳಿದರು.

ನಂದಗುಡಿ ಹೋಬಳಿಯ ನೆಲವಾಗಿಲು ಗ್ರಾಮದಲ್ಲಿ 14 ನೇ ಹಣಕಾಸು ಯೋಜನೆಯಡಿ 10 ಲಕ್ಷ ರು. ವೆಚ್ಚದ ಗ್ರಾ.ಪಂ. ಕಟ್ಟಡ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ಹೋಬಳಿಯ ಎಲ್ಲ ಗ್ರಾ.ಪಂ.ಗಳ ವ್ಯಾಪ್ತಿಯ ಹಳ್ಳಿಗಳಿಗೆ ನೂರಾರು ಕೋಟಿ ರು.ಗಳ ಅನುದಾನ ನೀಡಲಾಗಿದೆ. ಹಂತ ಹಂತವಾಗಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿದ್ದು, ಗ್ರಾಮಗಳ ಬಹಳಷ್ಟು ರಸ್ತೆಗಳ ಡಾಂಬರೀಕರಣ ಮತ್ತು ಸಿಮೆಂಟ್ ಕಾಂಕ್ರೀಟ್ ಮಾಡಲಾಗಿದೆ. ಪ್ರತಿ ಗ್ರಾಪಂ ವ್ಯಾಪ್ತಿಯಲ್ಲಿ ಅಗತ್ಯತೆಗೆ ಅನುಗುಣವಾಗಿ ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ. ಹೆಚ್ಚಿನ ಅನುದಾನವನ್ನು ತಂದು ಅಭಿವೃದ್ಧಿ ಕಾರ್ಯಗಳನ್ನು ಮಾಡುವುದರ ಮೂಲಕ ಮಾದರಿ ತಾಲೂಕನ್ನಾಗಿ ಮಾಡುವುದಾಗಿ ತಿಳಿಸಿದರು.



ನಂದಗುಡಿ ಹೋಬಳಿಯ ನೆಲವಾಗಿಲು ಗ್ರಾಮದಲ್ಲಿ 14 ನೇ ಹಣಕಾಸು ಯೋಜನೆಯಡಿ 10 ಲಕ್ಷ ರು. ವೆಚ್ಚದ ಗ್ರಾ.ಪಂ. ಕಟ್ಟಡ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು.

ಜಿ.ಪಂ. ಸದಸ್ಯ ಸಿ.ನಾಗರಾಜ್. ಬೆಂ. ಗ್ರಾ. ಜಿಲ್ಲಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುನಿಶಾಮಣ್ಣ , ಹೊಸಕೋಟೆ ತಾ. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಘುವೀರ್, ಭೂನ್ಯಾಯ ಮಂಡಳಿ ಸದಸ್ಯರಾದ ಶಂಕರ್, ನಾರಾಯಣ್, ಮುನಿವೀರಣ್ಣ , ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದ ಉಪಾಧ್ಯಕ್ಷ ಎಂ. ದೇವರಾಜ್, ಎಪಿಎಂಸಿ ಮಾಜಿ ನಿರ್ದೇಶಕ ಚಂದ್ರ ಮೋಹನ್, ಗ್ರಾಪಂ ಅಧ್ಯಕ್ಷೆ ಲಕ್ಷ್ಮೀ ನಾಗರಾಜ್, ಗ್ರಾಪಂ ಸದಸ್ಯ ವಿ. ಲೋಕೇಶ್, ಮಧುಸೂದನ್, ರತ್ನಮ್ಮ ನಾರಾಯಣ ಸ್ವಾಮಿ, ಮುಖಂಡರಾದ ನಂದಗುಡಿ ಎನ್.ಆರ್. ಶಿವು , ನಾರಾಯಣ ಸ್ವಾಮಿ , ಓಬಳಹಳ್ಳಿ ರಾಜಪ್ಪ , ಕೊಂಡ್ರಹಳ್ಳಿ ದೇವರಾಜ್, ಪಿಡಿಒ ಮುನಿಗಂಗಪ್ಪ , ಗುತ್ತಿಗೆದಾರ ಆಂಜಿನಪ್ಪ ಹಾಗೂ ನೂರಾರು ಗ್ರಾಮಸ್ಥರು ಭಾಗವಹಿಸಿದ್ದರು.

## ಕ್ರೀಡೆಯಿಂದ ಶಾರೀರಿಕ ಸಾಮರ್ಥ್ಯ

**ವಿಜಯಪುರ:** ವಿದ್ಯಾಭ್ಯಾಸದ ಜತೆಗೆ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಭಾಗವಹಿಸಬೇಕು. ಕ್ರೀಡೆ ಮನುಷ್ಯನ ಶಾರೀರಿಕ ಸಾಮರ್ಥ್ಯವನ್ನು ಹೆಚ್ಚಿಸುವುದಲ್ಲದೇ ಮಾನಸಿಕ ಒತ್ತಡವನ್ನು ನಿವಾರಿಸುವ ಶಕ್ತಿ ಎಂದು ಬೆಂಗಳೂರು ಗ್ರಾಮಾಂತರ ಜಿಪಂ ಅಧ್ಯಕ್ಷ ವಿ. ಪ್ರಸಾದ್ ಹೇಳಿದರು.

ಶ್ರೀಕಂಠೀರವ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿ, ಕ್ರೀಡಾಪಟುಗಳು ರಾಜ್ಯ ಮಟ್ಟದ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತರಬೇಕು. ಮುಂದಿನ ದಿನಗಳಲ್ಲಿ ಕ್ರೀಡಾಪಟುಗಳಿಗೆ ಸುಸಜ್ಜಿತ ಕ್ರೀಡಾಂಗಣ, ಮೂಲ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲೆಯ ನೆಲಮಂಗಲ, ಹೊಸಕೋಟೆ, ದೊಡ್ಡಬಳ್ಳಾಪುರ, ದೇವನಹಳ್ಳಿ ತಾಲೂಕಿನ ಒಂದು ಸಾವಿರಕ್ಕೂ ಹೆಚ್ಚಿನ ಕ್ರೀಡಾಪಟುಗಳು ಇದ್ದು, ದೇವನಹಳ್ಳಿ ಶಾಸಕರಾದ ಪಿಳ್ಳ ಮುನಿಶಾಮಪ್ಪ, ಜಿಲ್ಲಾ ಪಂಚಾಯತ್ ಸದಸ್ಯೆ ರಾಧಮ್ಮಾ, ಎನ್. ಮುನಿರಾಜು, ಜಿಲ್ಲಾಧಿಕಾರಿ ಎಸ್. ಪಾಲಯ್ಯ, ಮುಖ್ಯ ಕಾರ್ಯ ನಿರ್ವಾಹಣ ಅಧಿಕಾರಿ ಕೆ.ಎ.ದಯಾನಂದ್ ಕಾರ್ಯಕ್ರಮದಲ್ಲಿ ಇದ್ದರು.



ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿದ ಜಿಲ್ಲಾ ಪಂಚಾಯತ್‌ನ ಅಧ್ಯಕ್ಷ ವಿ. ಪ್ರಸಾದ್.

## ದ್ವಿಚಕ್ರ ವಾಹನ ಕಳವು ಮಾಡುತ್ತಿದ್ದ ಖದೀಮನ ಬಂಧನ



ಕದ್ದ ಬೈಕ್‌ಗಳೊಂದಿಗೆ ಆರೋಪಿ ಮೆಹಬೂಬ್ ಪಾಷ ಹಾಗೂ ದೇವನಹಳ್ಳಿ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ.

**ದೇವನಹಳ್ಳಿ:** ಯಲಹಂಕ, ಚಿಕ್ಕಬಳ್ಳಾಪುರ, ಚಿಕ್ಕಜಾಲಾ, ದೇವನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳ್ಳತನ ಮಾಡುತ್ತಿದ್ದ ಖದೀಮನನ್ನು ದೇವನಹಳ್ಳಿ ಪೊಲೀಸರು ಬಂಧಿಸಿದ್ದಾರೆ.



ಬಂಧಿತನು ಅಕ್ರಮ್ ಪಾಷ ಎಂಬುವವರ ಮಗ. 19 ವರ್ಷದ ಮೆಹಬೂಬ್ ಪಾಷ, ಚಿಕ್ಕಬಳ್ಳಾಪುರ ನಗರದ ಹರಳೆ ಪೇಟೆಯ ಚಿಕ್ಕಬಜನೆ ಮಂದಿರದ ಬಳಿ ವಾಸ ವಾಗಿದ್ದಾನೆ. ಇವನು ಅಪಹರಿಸಿದ್ದ 4 ಲಕ್ಷ ರು. ಮೌಲ್ಯದ ವಿವಿಧ ರೀತಿಯ 8 ದ್ವಿಚಕ್ರ ವಾಹನಗಳನ್ನು ಪೊಲೀಸರು ವಶಪಡಿಸಿ ಕೊಂಡಿದ್ದಾರೆ.

ಈಶಾನ್ಯ ವಿಭಾಗದ ಉಪ ಪೊಲೀಸ್ ಆಯುಕ್ತರಾದ ಗಿರೀಶ್ ಅವರ ಮಾರ್ಗದರ್ಶನದಲ್ಲಿ ದೇವನಹಳ್ಳಿ ಉಪ ವಿಭಾಗದ ಎಸಿಪಿ ಗುರುಸ್ವಾಮಿ ನೇತೃತ್ವದಲ್ಲಿ ಪೊಲೀಸ್ ಇನ್‌ಸ್ಪೆಕ್ಟರ್ ಪಿ. ಶಿವಸ್ವಾಮಿ, ಪಿಎಸ್‌ಐ ನಂದೀಶ್, ಗಂಗ ರುದ್ರಯ್ಯ, ಶಿವರಾಜ್ ಹಾಗೂ ಸಿಬ್ಬಂದಿ ಗಳಾದ ಮಂಜುನಾಥ್, ಚನ್ನಕೃಷ್ಣ ಕಿರಣ್, ಸೈಯದ್ ಇಸ್ಮಾಯಿಲ್ ಅವರು ಕಾರ್ಯಾ ಚರಣೆ ನಡೆಸಿ ದೇವನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿ ವಿಜಯಪುರ ಕ್ರಾಸ್ ಬಳಿ ಆರೋಪಿಯನ್ನು ಬಂಧಿಸಿದ್ದಾರೆ.

## ಯಾವುದೇ ಸಮುದಾಯಕ್ಕೂ ಒಗ್ಗಟ್ಟು ಅಗತ್ಯ: ಬಚ್ಚೇಗೌಡ

**ಸೂಲಿಬೆಲೆ:** ಯಾವುದೇ ಸಮುದಾಯಗಳಾಗಲ್ಲಿ ಒಗ್ಗಟ್ಟಿನ ಮೂಲಕ ಸಂಘಗಳನ್ನು ಸಂಘಟಿಸುವ ಮೂಲಕ ತಮ್ಮ ಹಕ್ಕುಗಳನ್ನು ಮತ್ತು ಸವಲತ್ತು ಗಳನ್ನು ಪಡೆದುಕೊಳ್ಳಬೇಕು ಎಂದು ಮಾಜಿ ಸಚಿವ ಬಿ.ಎನ್.ಬಚ್ಚೇಗೌಡ ಹೇಳಿದರು.

ಹೊಸಕೋಟೆ ತಾಲೂಕಿನ ವಿಶ್ವಕರ್ಮ ಸಂಘದ ಪದಾಧಿಕಾರಿಗಳಿಂದ ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ಸಮಾಜದ ಒಳಿತಿಗಾಗಿ ಹಾಗೂ ಸಮಾಜ ಮುಖಿ ಯಾಗಿ ಕೆಲಸ ಮಾಡಬೇಕು ಯಾವುದೇ ತಾರತಮ್ಯ ವಿಲ್ಲದೇ ಸದಾ ಸಮಾಜದ ಚಿಂತನೆಯನ್ನು ಗುರಿಯಾಗಿಟ್ಟು ಕೊಳ್ಳ ಬೇಕು ಹಾಗೂ ಅನ್ಯ ಸಮುದಾಯಕ್ಕೆ ತೊಂದರೆ ನೀಡುವ ಕೆಲಸವಾಗ ಬಾರದು ಎಂದು ಹೇಳಿದರು.

ವಿಶ್ವಕರ್ಮ ಸಂಘದ ತಾಲೂಕು ಅಧ್ಯಕ್ಷ ಆನಂದಚಾರಿ, ಉಪಾಧ್ಯಕ್ಷ ನಟ ರಾಜ್, ಕಾರ್ಯದರ್ಶಿ ಅಣ್ಣಯ್ಯಚಾರ್, ಮಹಿಳಾ ಅಧ್ಯಕ್ಷೆ ಗೋವಿಂದಮ್ಮ ಪಧಾಧಿಕಾರಿಗಳು ಹಾಜರಿದ್ದರು.



ಹೊಸಕೋಟೆ ತಾಲೂಕಿನ ವಿಶ್ವಕರ್ಮ ಸಮುದಾಯದ ತಾಲೂಕು ಪದಾಧಿಕಾರಿಗಳು ಮಾಜಿ ಸಚಿವ ಬಿ.ಎನ್.ಬಚ್ಚೇಗೌಡರನ್ನು ಸನ್ಮಾನಿಸಿದರು.

## ರೈತರಿಂದ, ರೈತರಿಗಾಗಿ ಬೆಂಗಳೂರು ಹಾಲು ಒಕ್ಕೂಟ



ಆನೇಕಲ್ ತಾಲೂಕಿನ ಚಂದಾಪುರ ಅನ್ನಪೂರ್ಣೇಶ್ವರಿ ಕಲ್ಯಾಣ ಮಂಟಪದ ಆವರಣದಲ್ಲಿ ಆಯೋಜಿಸಿದ್ದ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಮುಖ್ಯ ಕಾರ್ಯನಿರ್ವಾಹಕರ ಪ್ರಾದೇಶಿಕ ಸಭೆಯನ್ನು ಅಧ್ಯಕ್ಷ ಅಪ್ಪಯ್ಯಣ್ಣ ಉದ್ಘಾಟಿಸಿದರು.

**ವಿಶ್ವವಾಣಿ ಸುದ್ದಿಮನೆ** ಆನೇಕಲ್

ರೈತರಿಂದ ರೈತರಿಗೋಸ್ಕರ ರಚನೆಯಾಗಿರುವ ಸಂಸ್ಥೆ ಬೆಂಗಳೂರು ಹಾಲು ಒಕ್ಕೂಟ ಎಂದು ಬಮೂಲ್‌ನ ಮಾಜಿ ಅಧ್ಯಕ್ಷ ಆರ್. ಕೆ. ರಮೇಶ್ ತಿಳಿಸಿದರು. ಅವರು ತಾಲೂಕಿನ ಚಂದಾಪುರ ಅನ್ನ ಪೂರ್ಣೇಶ್ವರಿ ಕಲ್ಯಾಣ ಮಂಟಪದ ಆವ ರಣದಲ್ಲಿ ಆಯೋಜಿಸಿದ್ದ ಹಾಲು ಉತ್ಪಾ ದಕರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಮುಖ್ಯ ಕಾರ್ಯ ನಿರ್ವಾಹಕರ ಪ್ರಾದೇಶಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಬೆಂಗಳೂರು ಹಾಲು ಒಕ್ಕೂಟವು ರೈತರ ಸರ್ವತೋಮುಖ ಅಭಿವೃದ್ಧಿಗೆ ರೂಪಿತ ವಾಗಿರುವ ಸಂಸ್ಥೆಯಾಗಿದ್ದು ರೈತರ ತೀ ರ್ಮಾನಕ್ಕೆ ಎಲ್ಲರೂ ಬದ್ಧರಾಗಿ ಕೆಲಸ ನಿರ್ವ ಹಿಸಲಾಗುವುದು ಎಂದರು. ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಆರೋಗ್ಯವಿಮೆ ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಯ ದರ್ಶಿಗಳಿಗೆ ಮತ್ತು ಸಿಬ್ಬಂದಿಗೆ ಪ್ರೋತ್ಸಾಹ ಧನವನ್ನು ಬಮೂಲ್ ವತಿಯಿಂದ ನೀಡಲಾಗುತ್ತಿದ್ದು ತಾಲೂಕಿನ ಪ್ರತಿಯೊಬ್ಬರು ರಾಸುಗಳಿಗೆ ಮತ್ತು ತಮಗೆ ಕಡ್ಡಾಯವಾಗಿ ವಿಮೆ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಬಮೂಲ್ ನಿರ್ದೇಶಕ ಬಿ.ಜೆ. ಆಂಜಿನಪ್ಪ ಮಾತನಾಡಿ ಬೆಂಗಳೂರು ಹಾಲು ಒಕ್ಕೂಟವು ಕಳೆದ ಮೂರು ವರ್ಷಗಳಿಂದ ಗುಣ ಮಟ್ಟದ ಹಾಲಿನ ಪೂರೈಕೆಯಲ್ಲಿ ರಾಜ್ಯ ದಲ್ಲಿಯೇ ಮೊದಲನೆ ಸ್ಥಾನವನ್ನು ಗಳಿಸಿದ್ದು ಸಂತಸದ ಸಂಗತಿ ಎಂದರು.

ಇದೇ ಸಂದ ರ್ಭದಲ್ಲಿ ಹಾಲು ಉತ್ಪಾದಕ ಸಹಕಾರ ಸಂಘ ಗಳಲ್ಲಿ ಉತ್ತಮವಾಗಿ ಸೇವೆ ಸಲ್ಲಿಸಿದ್ದ ಅಧ್ಯಕ್ಷ ರನ್ನು ಮತ್ತು ಕಾರ್ಯ ದರ್ಶಿ ಮತ್ತು ಸಿಬ್ಬಂ ದಿ ವರ್ಗದವರನ್ನು ಸನ್ಮಾನಿಸಲಾಯಿತು.

ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷ ಅಪ್ಪಯ್ಯಣ್ಣ, ವ್ಯವಸ್ಥಾಪಕ ನಿರ್ದೇಶಕ ನಾಗರಾಜಯ್ಯ, ಎನ್. ಕೃಷ್ಣಾರೆಡ್ಡಿ, ರಂಗಸ್ವಾಮಿ, ಆನೇಕಲ್ ಶಿಬಿರ ಕಚೇರಿಯ ಉಪ ವ್ಯವಸ್ಥಾಪಕ ಡಾ. ಮೋಹನ್ ಕುಮಾರ್ ಮತ್ತಿತರು ಹಾಜರಿದ್ದರು.

ರಾಷ್ಟ್ರೀಯ ಬಿಜೆಪಿ ರೈತಮೋರ್ಚಾ ನಿಕಟಪೂರ್ವ ಪ್ರಧಾನ ಕಾರ್ಯದರ್ಶಿ ಶಂಕರನಾರಾಯಣರೆಡ್ಡಿ ಮನವಿ

## ಕೇಂದ್ರದ ಸಾಧನೆ ವಿವರಿಸಿ : ಶಂಕರನಾರಾಯಣ ರೆಡ್ಡಿ

**ವಿಶ್ವವಾಣಿ ಸುದ್ದಿಮನೆ** ವಿಜಯಪುರ

ಪ್ರಹರಿ ಪ್ರಮುಖ್‌ಗೆ ಗ್ರಾಮಪಂಚಾಯಿತಿಯ ಅಧ್ಯಕ್ಷರಿಗಿರು ವಷ್ಟು ಅಧಿಕಾರವಿದ್ದು, ಸ್ಥಳೀಯ ಅಧಿಕಾರಿಗಳ ದುರ್ನಡತೆ, ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುವ ಕಾಮಗಾರಿಗಳ ಬಗ್ಗೆ ಉಸ್ತುವಾರಿ, ಅವ್ಯವಹಾರಗಳ ಬಗ್ಗೆ ಕ್ರಮಕೈಗೊಳ್ಳಬಹುದು ಎಂದು ರಾಷ್ಟ್ರೀಯ ಬಿಜೆಪಿ ರೈತಮೋರ್ಚಾ ನಿಕಟಪೂರ್ವ ಪ್ರಧಾನ ಕಾರ್ಯದರ್ಶಿ ಶಂಕರನಾರಾಯಣರೆಡ್ಡಿ ತಿಳಿಸಿದರು.

ಇಲ್ಲಿಗೆ ಸಮೀಪದ ಹಾರೋಹಳ್ಳಿಯ ಜಿಲ್ಲಾ ಬಿಜೆಪಿ ರೈತಮೋರ್ಚಾ ಅಧ್ಯಕ್ಷ ಎನ್. ರಾಜಗೋಪಾಲ್ ಅವರ ನಿವಾಸದ ಆವರಣದಲ್ಲಿ ಜಿಲ್ಲಾ ಬಿಜೆಪಿ ರೈತಮೋರ್ಚಾ ವತಿಯಿಂದ ಆಯೋಜಿಸಿದ್ದ ಜಿಲ್ಲಾಮಟ್ಟದ ರೈತಪ್ರಹರಿ ವರ್ಗದ ಕಾರ್ಯಾಗಾರದಲ್ಲಿ ಸಂಪನ್ಮೂಲವ್ಯಕ್ತಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ಕೇಂದ್ರ ಸರಕಾರದ ಸಾಧನೆಗಳನ್ನು ಜನರಿಗೆ ಮೊಬೈಲ್ ಹಾಗೂ ಇನ್ನಿತರೆ ವಿಧಾನಗಳಇಂದ ತಿಳಿಸಬೇಕು ಎಂದರು.

ಬಿಜೆಪಿ ರೈತಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಬ್ಯಾಟರಂಗೇಗೌಡ ಮಾತನಾಡಿ, ರೈತಮೋರ್ಚಾ ತಾಲೂಕಿನಲ್ಲಿ ವಿಶೇಷ ಅಭಿಯಾನ ಆರಂಭಿಸಲಿದ್ದು, ಸಂಘಟನೆ ಮಾಡಿ ನವೆಂಬರ್ ವೇಳೆಗೆ ಸುಮಾರು 5000 ಕಾರ್ಯಕರ್ತರೊಂದಿಗೆ ಸರ್ಕಾರದ ವೈಫಲ್ಯ ವಿರೋಧಿಸಿ ಕೃಷಿ ಸಚಿವರ ಮನೆಮುಂದೆ ಧರಣಿ ನಡೆಸಲಾಗುವುದು ಎಂದರು.



ವಿಜಯಪುರ ಸಮೀಪದ ಹಾರೋಹಳ್ಳಿಯಲ್ಲಿ ಜಿಲ್ಲಾ ಬಿಜೆಪಿ ರೈತಮೋರ್ಚಾ ಅಧ್ಯಕ್ಷ ಎನ್. ರಾಜಗೋಪಾಲ್ ಅವರ ನಿವಾಸದ ಆವರಣದಲ್ಲಿ ಜಿಲ್ಲಾ ಬಿಜೆಪಿ ರೈತಮೋರ್ಚಾ ವತಿಯಿಂದ ಆಯೋಜಿಸಿದ್ದ ಜಿಲ್ಲಾಮಟ್ಟದ ರೈತಪ್ರಹರಿ ವರ್ಗದ ಕಾರ್ಯಾಗಾರವನ್ನು ರಾಷ್ಟ್ರೀಯ ಬಿಜೆಪಿ ರೈತಮೋರ್ಚಾ ನಿಕಟಪೂರ್ವ ಪ್ರಧಾನ ಕಾರ್ಯದರ್ಶಿ ಶಂಕರನಾರಾಯಣರೆಡ್ಡಿ ಉದ್ಘಾಟಿಸಿದರು.

**ರಸಗೊಬ್ಬರಕ್ಕೆ ಕೊರತೆ ಇಲ್ಲ:** ಜಿಲ್ಲಾ ಬಿಜೆಪಿ ಅಧ್ಯಕ್ಷ ಬಿ.ರಾಜಣ್ಣ ಮಾತನಾಡಿ, ಬಯಲುಸೀಮೆ ಪ್ರದೇಶಗಳಿಗೆ ಶಾಶ್ವತ ನೀರು ಒದಗಿಸುವ ನೀರಾವರಿ ಯೋಜನೆಗಳು ಕೇವಲ ಕನಸಾಗಿಯೇ ಉಳಿದಿದ್ದು, ಕಾಂಗ್ರೆಸ್ ಸರ್ಕಾರವು ಕೇವಲ ಪೈಪುಗಳನ್ನು ಕೊಂಡು ಸ್ಥಳದಲ್ಲಿ ಇಳಿಸಿರುವುದನ್ನೇ ಸಾಧನೆಯೆಂಬಂತೆ ಬಿಂಬಿಸುತ್ತಿದೆ.

ಜಿಲ್ಲೆಯ ನಾಲ್ಕೂ ತಾಲೂಕು ಗಳಲ್ಲಿಯೂ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳೇ ಆಯ್ಕೆಯಾಗಲಿದ್ದಾರೆ. ಜನರು ಕೇಂದ್ರಸರ್ಕಾರದ ಜನಪರ ಯೋಜನೆಗಳನ್ನು ಮೆಚ್ಚಿಕೊಂಡಿದ್ದಾರೆ. ಕೇಂದ್ರದ ಸಹಕಾರದಿಂದ ರೈತರಿಗೆ ಬೇಕಾದ ರಸಗೊ ಬ್ಬರಕ್ಕೆ ಕೊರತೆಯಿಲ್ಲದಾಗಿದೆ ಎಂದು ತಿಳಿಸಿದರು.

ತಾಲೂಕು ಭೂನ್ಯಾಯಮಂಡಳಿಯ ಮಾಜಿ ಸದಸ್ಯ ಡಿ.ಆರ್.ನಾರಾಯಣಸ್ವಾಮಿ, ಜಿಲ್ಲಾ ಬಿಜೆಪಿ ರೈತಮೋರ್ಚಾ ಅಧ್ಯಕ್ಷ ಎನ್. ರಾಜಗೋಪಾಲ್, ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಕೆ.ನಾಗೇಶ್, ತಾಲೂಕು ಬಿಜೆಪಿ ಅಧ್ಯಕ್ಷ ಸಿ.ನಾಗರಾಜಗೌಡ, ಮಾಜಿ ಅಧ್ಯಕ್ಷ ಹನುಮಂತರಾಯಪ್ಪ, ಆವತಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಎ.ವಿ. ನಾರಾಯಣಸ್ವಾಮಿ, ತಾಲೂಕು ಬಿಜೆಪಿ ರೈತಮೋರ್ಚಾ ಅಧ್ಯಕ್ಷ ರಾಜಣ್ಣ ಮಾತನಾಡಿದರು.

ರೈತಮೋರ್ಚಾ ಹೊಸಕೋಟೆ ತಾಲೂಕು ಅಧ್ಯಕ್ಷ ವೆಂಕಟೇಶ್, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ವತ್ಸಲಾ, ತಾಲೂಕು ಬಿಜೆಪಿ ಕಾರ್ಯದರ್ಶಿ ಸುನಿಲ್, ಪುರಸಭೆ ಮಾಜಿ ಸದಸ್ಯ ಟಿಲ್ಲರ್ ಮಂಜುನಾಥ್, ಕೃಷ್ಣಪ್ಪ, ಟೌನ್ ಬಿಜೆಪಿ ಕಾರ್ಯದರ್ಶಿ ರವಿಕುಮಾರ್, ವಿವಿಧ ತಾಲೂಕುಗಳ ರೈತಮೋರ್ಚಾ ಪದಾಧಿಕಾರಿಗಳು ಪಾಲ್ಗೊಂಡಿದ್ದರು.